# ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ಬೆಂಗಳೂರು ಇವರ ನಡವಳಿಗಳು

**ವಿಷಯ:–** 2018–19ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಿದ್ಯಾಸಿರಿ ಯೋಜನೆಯಡಿ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಉಲ್ಲೇಖ:–** 1) ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 163 ಎಂಡಿಎಸ್ 2015, ದಿ: 21.09.2015
2) ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 257 ಎಂಡಿಎಸ್ 2018, ದಿ:11.04.2018
3) ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 257 ಎಂಡಿಎಸ್ 2018, ದಿ:30.07.2018

>>><<<

**ಪ್ರಸ್ತಾವನೆ:–**

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ವಿದ್ಯಾಸಿರಿ ಯೋಜನೆಯನ್ನು ಉಲ್ಲೇಖ(1)ರಲ್ಲಿ ಹೊರಡಿಸಿರುವ ಆದೇಶ ಹಾಗೂ ಮಾರ್ಗಸೂಚಿಗಳನ್ವಯ ಜಾರಿಗೊಳಿಸಲಾಗುತ್ತಿದೆ.

ಅದರಂತೆ ಮುಂದುವರೆದು, ಉಲ್ಲೇಖ(2) ಮತ್ತು ಉಲ್ಲೇಖ (3) ರ ಸರ್ಕಾರಿ ಆದೇಶದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗೆ ಮೊದಲನೇ, ಮತ್ತು ಎರಡನೇ ತ್ರೈಮಾಸಿಕ ಕಂತನ್ನು ಬಿಡುಗಡೆಯಾದ ಅನುದಾನದ ಪೈಕಿ ಅದರಲ್ಲಿ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಿದ್ಯಾಸಿರಿ ಯೋಜನೆಯಡಿ ರೂ 1500.00 ಲಕ್ಷ (ಒಂದು ಸಾವಿರದ ಐದುನೂರು ಲಕ್ಷ ರೂಗಳು ಮಾತ್ರ) ಗಳನ್ನು ಬಿಡುಗಡೆ ಮಾಡಿ ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು ಇವರ ವಶಕ್ಕೆ ಬಿಡುಗಡೆ ಮಾಡಲಾಗಿದೆ. ಸದರಿ ಅನುದಾನದಲ್ಲಿ ವಿದ್ಯಾಸಿರಿ ಯೋಜನೆಯಡಿ ರೂ 1500.00 ಲಕ್ಷ (ಒಂದು ಸಾವಿರದ ಐದುನೂರು ಲಕ್ಷ ರೂಗಳು ಮಾತ್ರ) ಗಳನ್ನು ಸಂಬಂಧಪಟ್ಟ ಜಿಲ್ಲೆಯ **ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ** ರವರಿಗೆ ಬಿಡುಗಡೆ ಮಾಡಲು ಈ ಕೆಳಕಂಡಂತೆ ಆದೇಶ

## ಆ ದೇ ಶ

**ಸಂಖ್ಯೆ: ಅಸಂನಿ/ವಿ.ಸಿ/ಸಿಆರ್–104/2017–18** **ದಿನಾಂಕ: 09.11.2018**

ಪ್ರಸ್ತಾವನೆ ವಿವರಗಳಂತೆ, ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಿದ್ಯಾಸಿರಿ ಅಭಿವೃದ್ದಿ ಯೋಜನೆಯಡಿ 2018–19ನೇ ಸಾಲಿನಲ್ಲಿ ಜಾರಿಗೊಳಿಸಲು ಸದರಿ ಯೋಜನೆಗೆ ಸರ್ಕಾರದಿಂದ ಬಿಡುಗಡೆಯಾದ ಮೊದಲನೇ, ಮತ್ತು ಎರಡನೇ ತ್ರೈಮಾಸಿಕ ಕಂತಿನ ಅನುದಾನದ ರೂ 1500.00 ಲಕ್ಷ (ಒಂದು ಸಾವಿರದ ಐದುನೂರು ಲಕ್ಷ ರೂಗಳು ಮಾತ್ರ) ಗಳನ್ನು ಅಲ್ಪಸಂಖ್ಯಾತರ ಸಮುದಾಯದ ಯುವಕ/ಯುವತಿಯರಿಗೆ ಅಂದರೆ ಮುಸ್ಲಿಂ, ಕ್ರೈಸ್ತ, ಜೈನ್, ಬೌದ್ಧರು, ಸಿಖ್ ಮತ್ತು ಪಾರ್ಸಿ ಜನಾಂಗದ ವಿದ್ಯಾರ್ಥಿಗಳಿಗೆ ರೂ 1500.00 ಲಕ್ಷ (ಒಂದು ಸಾವಿರದ ಐದುನೂರು ಲಕ್ಷ ರೂಗಳು ಮಾತ್ರ) ಗಳನ್ನು ಲಗತ್ತಿಸಿರುವ ಅನುಬಂಧ ಅನ್ವಯ ಆಯಾ ಜಿಲ್ಲೆಗಳ ಮುಂದೆ ನಮೂದಿಸಿರುವ ಅನುದಾನವನ್ನು ಸಂಬಂಧಪಟ್ಟ ಜಿಲ್ಲೆಯ **ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ** ರವರಿಗೆ ಕೆಳಕಂಡ ನಿಬಂಧನೆಗೊಳಪಟ್ಟು ಬಿಡುಗಡೆ ಮಾಡಲಾಗಿದೆ.

ನಿಬಂಧನೆಗಳು:-

1) ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲುಡಿ 163 ಎಂಡಿಎಸ್ 2015, ದಿ: 21.09.2015ರಲ್ಲಿ ನೀಡಲಾಗಿರುವ ಮಾರ್ಗಸೂಚಿಯನ್ವಯ ಸದರಿ ಯೋಜನೆಗೆ ಅನುಷ್ಠಾನಗೊಳಸತಕ್ಕದ್ದು/ವೆಚ್ಚಮಾಡುವುದು.
2) ಸರ್ಕಾರಿ ಆದೇಶ ಸಂಖ್ಯೆ ಎಂಡಬ್ಲುಡಿ 163 ಎಂಡಿಎಸ್ 2015, ದಿ: 21.09.2015ರ ಮಾರ್ಗಸೂಚಿಯಂತೆ : ವಿದ್ಯಾರ್ಥಿಗಳು ಗ್ರಾಮೀಣ ಪ್ರದೇಶದವರಾಗಿರಬೇಕು ಹಾಗೂ ವ್ಯಾಸಂಗ ಮಾಡುವ ಕಾಲೇಜಿನಿಂದ ಕನಿಷ್ಠ 5 ಕಿ.ಮೀ ದೂರದವರಾಗಿರಬೇಕು. ಆದರೆ, ವಿದ್ಯಾರ್ಥಿಯ ಸ್ವಂತ ಸ್ಥಳ, ನಗರ/ಪಟ್ಟಣ ಆಗಿದ್ದು, ಅವರು ಬೇರೆ ನಗರ/ಪಟ್ಟಣದಲ್ಲಿರುವ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿದ್ದಲ್ಲಿ, ಅಂತಹವರು ಈ ಸೌಲಭ್ಯಕ್ಕೆ ಅರ್ಹರಿರುತ್ತಾರೆ. (ಒಂದೇ ನಗರದ ವ್ಯಾಪ್ತಿಯಲ್ಲಿ ಇರುವವರು ಅರ್ಹರಿರುವುದಿಲ್ಲ)
3) ಸ್ವಿಕೃತ ಅರ್ಜಿಗಳನ್ನು ಆಗ್ಗಿಂದಾಗೆ ಹೊರಡಿಸಲಾಗಿರುವ ಆದೇಶ, ಸುತ್ತೋಲೆಗಳಲ್ಲಿ ನೀಡಿರುವ ಸೂಚನೆಗಳು / ಷರತ್ತುಗಳಂತೆ ಕುಲಂಕುಶವಾಗಿ ಪರಿಶೀಲಿಸಿ ಅರ್ಹ ಫಲಾನುಭವಿಗಳಿಗೆ ಅನುದಾನ ಮಾಡತಕ್ಕದ್ದು ಯಾವುದೇ ತಪ್ಪಾಗಿದ್ದಲ್ಲಿ ಮುಂದೆ ಹಾಗೂ ಹೋಗುಗಳಿಗೆ ನೇರವಾಗಿ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ / ಹಿಂದುಳಿದ ವರ್ಗಗಳ & ಅಲ್ಪಸಂಖ್ಯಾತರ ಕಲ್ಯಾಣ ಆದಿಕಾರಿಗಳನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು.
4) ಅಲ್ಪಸಂಖ್ಯಾತರ ಮೆಟ್ರಿಕ್ ನಂತರ ಬಾಲಕ/ಬಾಲಕಿಯರ ವಿದ್ಯಾರ್ಥಿ ನಿಲಯಗಳು ಇರುವ ಸ್ಥಳಗಳಲ್ಲಿ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಮೀಸಲಿರುವ ಸ್ಥಾನಗಳನ್ನು ಭರ್ತಿ ಮಾಡುವುದು.
5) ವಿದ್ಯಾರ್ಥಿನಿಲಯಗಳಿಗೆ ಮಂಜೂರಾದ ಸಂಖ್ಯಾಬಲಕ್ಕೆ ತಕ್ಕಂತೆ ಅಲ್ಪಸಂಖ್ಯಾತರ ವಿದ್ಯಾರ್ಥಿಗಳನ್ನು ಭರ್ತಿ ಮಾಡಿ ನಂತರದ ಹೆಚ್ಚುವರಿ ಅರ್ಜಿಗಳನ್ನು ಮಾತ್ರ ವಿದ್ಯಾಸಿರಿ ಯೋಜನೆಯಡಿ ಪರಿಗಣಿಸುವುದು.
6) ಈ ಯೋಜನೆಯಡಿ ನಿಗಧಿಪಡಿಸಿದ ಆರ್ಥಿಕ ಮತ್ತು ಭೌತಿಕ ಗುರಿಗೆ ತಕ್ಕಂತೆ ಸ್ವೀಕೃತವಾದ ಅರ್ಹ ಅರ್ಜಿಗಳಲ್ಲಿ ಹಿಂದಿನ ವರ್ಷದ ವಾರ್ಷಿಕ /ಸೆಮಿಸ್ಟರ್ ತರಗತಿಯಲ್ಲಿ ಹೆಚ್ಚು ಅಂಕಗಳನ್ನು ಪಡೆದ ವಿದ್ಯಾರ್ಥಿಗಳಿಗೆ ಇಳಿಕೆ ಕ್ರಮಾನುಸಾರ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿರುವ ಕೋರ್ಸುಗಳ ಅಧಾರದ ಮೇಲೆ ಮಂಜೂರು ಮಾಡತಕ್ಕದ್ದು.
7) ಸದರಿ ಯೋಜನೆಗೆ ಒದಗಿಸಿರುಲವ ಆಯವ್ಯಯದ ಲಭ್ಯಯನ್ನಾಧರಿಸಿ ಭೌತಿಕ ಗುರಿಯನ್ನು ಜನಸಂಖ್ಯಾ ಆಧಾರದ ಮೇಲೆ ನಿಗಧಿಪಡಿಸಲಾಗಿದೆ.
8) ಪ್ರತಿ ವಿದ್ಯಾರ್ಥಿಗೆ ಮಾಹೆಯಾನ ರೂ 1,500/- ರಂತೆ 10 ತಿಂಗಳಿಗೆ ರೂ 15,000/- ಗಳನ್ನು (ಗರಿಷ್ಠ) ಬಿಡುಗಡೆ ಮಾಡುವುದು.
9) ಈ ಆದೇಶಲ್ಲಿ ಬಿಡುಗಡೆಯಾದ ಅನುದಾನವನ್ನು ಹೊರತುಪಡಿಸಿ ಹೆಚ್ಚುವರಿಅನುದಾನವನ್ನು ಕೋರುವಂತಿಲ್ಲ.
10) ಭರ್ತಿ ಮಾಡಿದ ಅರ್ಜಿಗಳನ್ನು ಜಿಲ್ಲಾ ಕಛೇರಿಯಲ್ಲಿ ಸ್ವೀಕರಿಸುವಂತೆ ವ್ಯವಸ್ಥೆ ಮಾಡುವುದು..
11) ಜಿಲ್ಲಾ ಕಛೇರಿಯಲ್ಲಿ ಸ್ವೀಕೃತವಾದ ಅರ್ಜಿಗಳಲ್ಲಿ ತಮ್ಮ ಜಿಲ್ಲೆಗೆ ಸಂಬಂಧಪಟ್ಟ ಅರ್ಜಿಗಳನ್ನು ಕೂಲಂಕುಷವಾಗಿ ಸರ್ಕಾರಿ ಆದೇಶದಲ್ಲಿ ನಮೂದಿಸಿರುವ ಅರ್ಹತೆಯನುಸಾರ ಪರಿಶೀಲಿಸಿ ದಾಖಲಿಸುವುದು.
12) ಸ್ವೀಕೃತವಾದ ಒಟ್ಟು ಅರ್ಜಿಗಳ ಸಂಖ್ಯೆ, ಕ್ರಮ ಬದ್ಧವಾಗಿರುವ ಅರ್ಜಿಗಳ ಸಂಖ್ಯೆ ತಿರಸ್ಕೃತವಾದ ಅರ್ಜಿಗಳ ಸಂಖ್ಯೆಯನ್ನು ಸಮುದಾಯವಾರು, ಲಿಂಗಾವಾರು ಮಾಹಿತಿಯನ್ನು ನಿಗದಿತ ನಮೂನೆಯಲ್ಲಿ ನಿರ್ದೇಶನಾಲಯಕ್ಕೆ ನೀಡುವುದು.
13) ಸ್ವೀಕೃತ ಅರ್ಜಿಗಳಲ್ಲಿ ನಮೂದಿಸಿರುವ ಹೆಸರು, ತಂದೆ ಹೆಸರು, 10ನೇ ತರಗತಿ ನೊಂದಣಿ ಸಂಖ್ಯೆ/ಇತ್ಯಾದಿ ಆಧರಿಸಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ